## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 672 |
| ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ<br>(ಪದವೀಧರ ಕ್ಷೇತ್ರ) |
| ಉತ್ತರಿಸ ಬೇಕಾದ ದಿನಾಂಕ | 11.12.2023 |
| ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

*****

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಒಟ್ಟು ಸರ್ಕಾರಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; ಖಾಸಗಿ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು; | ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಒಟ್ಟು ಸರ್ಕಾರಿ & ಖಾಸಗಿ ಸಂಸ್ಥೆಗಳ ವಿವರ ಈ ಕೆಳಕಂಡಂತಿದೆ.<br><br>ಸರ್ಕಾರಿ-01.<br><br>ಖಾಸಗಿ-04. |
| ಆ) | ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿನ ಪ್ರತಿಭಾವಂತ ವಿದ್ಯಾರ್ಥಿಗಳು ಸರ್ಕಾರಿ ವೈದ್ಯಕೀಯ ಕಾಲೇಜು ಇಲ್ಲದೆ ಸರ್ಕಾರಿ ವೈದ್ಯಕೀಯ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಕುರಿತು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ.<br><br>ರಾಜ್ಯದ ಪ್ರತಿ ಜಿಲ್ಲೆಗೊಂದು ಸರ್ಕಾರಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸ ಬೇಕೆಂಬುದು ಸರ್ಕಾರದ ನೀತಿಯಾಗಿರುತ್ತದೆ.<br><br>ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ಅಂದಾಜು ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ.<br><br>ಅದರಂತೆ ಅನುದಾನದ ಲಭ್ಯತೆಯನ್ನು ಆಧರಿಸಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.<br><br>ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆಯು ಸದ್ಯಕ್ಕೆ ಸರ್ಕಾರದ ಹಂತದಲ್ಲಿ ಇರುವುದಿಲ್ಲ. |
| ಇ) | ವಿಜಯಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡಲು ಸ್ಥಳದ ಕೊರತೆ ಇದೆಯೇ; | |
| ಈ) | ಮುಂದಿನ ದಿನಗಳಲ್ಲಿ ವಿಜಯಪುರ ಅಥವಾ ಬಾಗಲಕೋಟೆ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ನಿರ್ಮಾಣ ಮಾಡಲಾಗುವುದು? | |

ಸಂಖ್ಯೆ: ಎಂಇಡಿ 692ಎಂಎಂಸಿ 2023

**(ಡಾ.ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು